...ಅರ್ಜಿಯಲ್ಲಿ ಶಂಕರ ದೂರಿದ್ದಾರೆ.

# ಮುಂದಿನ ಸಲ ಉಳಿತಾಯ ಬಜೆಟ್

## ಗ್ಯಾರಂಟಿ ಯೋಜನೆಗಳಿಂದ ಜನರ ಜೇಬು ತುಂಬಿಸುವ ಕೆಲಸ ಆಗುತ್ತಿದೆ: ಸಿಎಂ ಸಮರ್ಥನೆ

**ವಿಧಾನಪರಿಷತ್ತು:** ಎಪ್ಪತ್ತಾರು ಕಾರ್ಯಕ್ರಮಗಳನ್ನು ಬಜೆಟ್‌ನಲ್ಲಿ ನೀಡಿದ್ದೇವೆ. ಐದು ಗ್ಯಾರಂಟಿಗಳಿಗೆ ಅನುದಾನ ಮೀಸಲಿಟ್ಟಿದ್ದು ಈಗಾಗಲೇ ಅನುಷ್ಠಾನದ ವಿವಿಧ ಹಂತದಲ್ಲಿವೆ. ಹೀಗಿರುವಾಗ ದಿವಾಳಿ ಹೇಗೆ ಆಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ವಿಧಾನಮಂಡಲ ಅಧಿವೇಶನ

ಶುಕ್ರವಾರ ಮೇಲ್ಮನೆಯಲ್ಲಿ ಬಜೆಟ್ ಮೇಲಿನ ಚರ್ಚೆಗೆ ಉತ್ತರ ನೀಡಿದ ಅವರು, ವಾಸ್ತವವಾಗಿ ದೇಶ ಆರ್ಥಿಕವಾಗಿ ದಿವಾಳಿ ಆಗುತ್ತಿರುವುದು ಪ್ರಧಾನಿ ಮೋದಿ ಅವರಿಂದ. ಕಳೆದ 9 ವರ್ಷಗಳಲ್ಲಿ 118 ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಸ್ವಾತಂತ್ರ್ಯ ಬಂದ ನಂತರದಿಂದ 75 ವರ್ಷಗಳಲ್ಲಾದ ಸಾಲ 53.11 ಲಕ್ಷ ಕೋಟಿ ಆಗಿದೆ. ಅದೇನೇ ಇರಲಿ, ಮುಂದಿನ ಬಾರಿ ಉಳಿತಾಯದ ಬಜೆಟ್ ಮಂಡಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜನ ಬೆಲೆ ಏರಿಕೆಯಿಂದ ತತ್ತರಿಸಿದ್ದಾರೆ. ಮನಮೋಹನ್‌ಸಿಂಗ್ ಅವಧಿಯಲ್ಲಿ ಪ್ರತಿ ಲೀಟರ್‌ಗೆ 78.57 ರೂ. ಇದ್ದ ಪೆಟ್ರೋಲ್ ಬೆಲೆ ಇಂದು 107 ರೂ. ಆಗಿದೆ. ಅಡುಗೆ ಅನಿಲಕ್ಕೆ ಬರುತ್ತಿದ್ದ ಸಬ್ಸಿಡಿ 2020 ರಿಂದ ನಿಂತುಹೋಗಿದೆ. ಅಗತ್ಯವಸ್ತುಗಳ ಬೆಲೆ ಗಗನಕ್ಕೇರಿದೆ. ಇದೆಲ್ಲದರಿಂದ ಜನರ ಜೇಬಿಗೆ ಕತ್ತರಿಬೀಳುತ್ತಿದೆ. ಹಾಗಾಗಿ, ಆ ಜೇಬು ತುಂಬಿಸುವ ಕೆಲಸ ಗ್ಯಾರಂಟಿಗಳಿಂದ ಆಗುತ್ತಿದೆ ಎಂದು ಸಮರ್ಥನೆ ನೀಡಿದರು.



ಸಿಎಂ ಸಿದ್ದರಾಮಯ್ಯ ಅವರು ಶುಕ್ರವಾರ ಮೇಲ್ಮನೆಯಲ್ಲಿ ಬಜೆಟ್ ಮೇಲಿನ ಚರ್ಚೆಗೆ ಉತ್ತರ ನೀಡಿದರು.

### ಗಾಂಧಿ ಕೊಂದವರಿಂದಲೇ ಪ್ರತಿಮೆ ಮುಂದೆ ಪ್ರತಿಭಟನೆ!

ಗಾಂಧಿ ಕೊಂದ ವಂಶಸ್ಥರು ಈಗ ಅದೇ ಮಹಾತ್ಮ ಗಾಂಧಿ ಪ್ರತಿಮೆ ಎದುರು ನ್ಯಾಯಕೊಡಿಸುವಂತೆ ಪ್ರತಿಭಟನೆಗೆ ಕುಳಿತಿರುವುದು ದುರಂತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತೀಕ್ಷ್ಣವಾಗಿ ಹೇಳಿದರು. ಸತ್ಯ, ಅಹಿಂಸೆಗಾಗಿ ಹೋರಾಟ ಮಾಡಿದವರು ಮಹಾತ್ಮ ಗಾಂಧೀಜಿ. ಅವರನ್ನು ಕೊಂದ ಗೋಡ್ಸೆ ವಂಶಸ್ಥರು ಬಿಜೆಪಿಯವರು. ಸಾಮರಸ್ಯ ಕದಡುವ ಆ ಬಿಜೆಪಿಯವರು ಗಾಂಧಿ ಪ್ರತಿಮೆ ಎದುರು ಪ್ರತಿಭಟನೆ ನಡೆಸುತ್ತಿದ್ದಾರೆ. ಇವರಿಗೆ ಯಾವ ನೈತಿಕತೆ ಇದೆ ಎಂದು ತರಾಟೆಗೆ ತೆಗೆದುಕೊಂಡರು.

### ‘ಅಲ್ಲಿದೆ ನಮ್ಮನೆ ಇಲ್ಲಿರುವುದು ಸುಮ್ಮನೆ...’

‘ಬಿಜೆಪಿಯ ಎಚ್. ವಿಶ್ವನಾಥ್ ಮತ್ತು ಜೆಡಿಎಸ್‌ನ ಮರಿತಿಬ್ಬೇಗೌಡ ಟೆಕ್ನಿಕಲ್ ಆಗಿ ಅಲ್ಲಿರಬಹುದು. ಆದರೆ, ವಾಸ್ತವವಾಗಿ ಆ ಪಕ್ಷಗಳ ನಿಲುವಿಗೆ ವಿರುದ್ಧವಾಗಿಯೇ ಇದ್ದಾರೆ’ ಎಂದು ಮುಖ್ಯಮಂತ್ರಿ ಹೇಳಿದರು. ಪ್ರತಿಪಕ್ಷಗಳ ಸದಸ್ಯರೆಲ್ಲರೂ ಬಹಿಷ್ಕರಿಸಿದ್ದಾರೆ. ಈ ಇಬ್ಬರು ಮಾತ್ರ ಹಾಜರಾಗಿದ್ದಾರೆ. ಇವರಿಬ್ಬರೂ ತಾಂತ್ರಿಕವಾಗಿ ಪ್ರತಿಪಕ್ಷಗಳನ್ನು ಪ್ರತಿನಿಧಿಸುತ್ತಿದ್ದರೂ, ವಾಸ್ತವವಾಗಿ ಅವರು ಆ ಪಕ್ಷಗಳ ನಿಲುವಿಗೆ ವಿರುದ್ಧವಾಗಿದ್ದಾರೆ. ಕಾಂಗ್ರೆಸ್ ಪರವಾಗಿದ್ದಾರೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಎಚ್. ವಿಶ್ವನಾಥ್, ‘ನಾನು ಇಲ್ಲಿರುವುದು ಸುಮ್ಮನೆ. ಅಲ್ಲಿರುವುದು ನಮ್ಮನೆ’ ಎಂದು ಆಡಳಿತ ಪಕ್ಷ ಕಾಂಗ್ರೆಸ್ ಸದಸ್ಯರತ್ತ ಕೈ ತೋರಿಸಿದರು. ಅಷ್ಟೇ ಅಲ್ಲ, ಮುಖ್ಯಮಂತ್ರಿಗಳು ಬಜೆಟ್ ಮೇಲೆ ಉತ್ತರ ನೀಡುವಾಗ ಬ್ಯಾಂಡ್‌ಸೆಟ್ ಇದ್ದಿದ್ದರೆ ಕುಣಿಯೋಣ ಅನಿಸಿತು ಎಂದು ಸಂತಸ ವ್ಯಕ್ತಪಡಿಸಿದರು. ಆಗ ಸಭಾಪತಿ ಬಸವರಾಜ ಹೊರಟ್ಟಿ ‘ಇಲ್ಲಿ ಬೇಡ ಹೊರಗೆ ಹೋಗಿ ಕುಣಿಯಿರಿ’ ಎಂದು ಸೂಚ್ಯವಾಗಿ ಹೇಳಿದರು.

### ಸೂಕ್ತ ಮಾರ್ಗಸೂಚಿ ರಚನೆ

**ವಿಧಾನ ಪರಿಷತ್ತು:** ಪ.ಜಾತಿ ಹಾಗೂ ಪ.ಪಂಗಡಗಳಿಗೆ ಹಂಚಿಕೆಯಾದ ಜಮೀನನ್ನು ಸರ್ಕಾರದ ಅನುಮತಿ ಪಡೆದು ಪರಭಾರೆ ಮಾಡುವ ಸಂದರ್ಭದಲ್ಲೂ ಲೋಪದೋಷಗಳಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಸೂಕ್ತ ಮಾರ್ಗಸೂಚಿಗಳನ್ನು ರೂಪಿಸಲಾಗುವುದು ಎಂದು ಸಚಿವ ಕೃಷ್ಣಬೈರೇಗೌಡ ತಿಳಿಸಿದರು.



ಮೇಲ್ಮನೆಯಲ್ಲಿ ಶುಕ್ರವಾರ ಕರ್ನಾಟಕ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ವಿಧೇಯಕ-2023 (ಕೆಲವು ಭೂಮಿಗಳ ವರ್ಗಾವಣೆ ನಿಷೇಧ) (ತಿದ್ದುಪಡಿ) ಚರ್ಚೆ ವೇಳೆ ಮಾತನಾಡಿದ ಅವರು, ಭೂಮಿಯನ್ನು ಸರ್ಕಾರದ ಅನುಮತಿ ಪಡೆದು ಮಾರಾಟ ಮಾಡುವ ಸಂದರ್ಭದಲ್ಲೂ ಅನೇಕ ನ್ಯೂನತೆ ಇರುವುದು ಕಂಡುಬಂದಿದೆ. ವಾಸ್ತವಕ್ಕೆ ದೂರವಿರುವ ಅಂಶಗಳನ್ನು ಉಲ್ಲೇಖಿಸಿ ಅನುಮತಿ ಪಡೆದುಕೊಳ್ಳುವ ಪ್ರಕರಣಗಳು ಕಂಡುಬಂದಿವೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಅನುಮತಿ ಪಡೆಯುವ ಹಂತದಲ್ಲಿಯೂ ಮಾರ್ಗಸೂಚಿ ರೂಪಿಸುವ ಬಗ್ಗೆ ಪರಿಶೀಲಿಸಲಾಗುವುದು ಎಂದು ಹೇಳಿದರು.

ಅಷ್ಟೇ ಅಲ್ಲ, ಪ.ಜಾತಿ ಹಾಗೂ ಪ.ಪಂಗಡದವರಿಗೆ ಹಂಚಿಕೆಯಾದ ಭೂಮಿಯನ್ನು ಕೃಷಿಯೇತರ ಚಟುವಟಿಕೆಗಳೂ ಬಳಸಲು ಮುಕ್ತ ಅವಕಾಶವಿದೆ. ಈ ಯೋಜನೆಯಡಿಯಲ್ಲಿ ಭೂಮಿ ಎಂದು ಉಲ್ಲೇಖಿಸಲಾಗಿದೆ ಹೊರತು ಕೃಷಿಭೂಮಿ ಎಂದಲ್ಲ ಎಂದು ಸಚಿವರು ಪ್ರಶ್ನೆಯೊಂದಕ್ಕೆ ಸ್ಪಷ್ಟಪಡಿಸಿದರು.

ಇದಕ್ಕೂ ಮುನ್ನ ವಿಷಯ ಪ್ರಸ್ತಾಪಿಸಿದ ಸದಸ್ಯ ಮರಿತಿಬ್ಬೇಗೌಡ, 15 ವರ್ಷಗಳ ನಂತರ ಭೂಮಿ ಪರಭಾರೆ ಮಾಡಲು ಅವಕಾಶ ಇದೆ. ಆದರೆ, ಅದಕ್ಕೆ ಸರ್ಕಾರದ ಅನುಮತಿ ಪಡೆದು ಪರಭಾರೆ ಮಾಡಬೇಕು. ಈ ಸಂದರ್ಭದಲ್ಲಿ ತಪ್ಪು ಮಾಹಿತಿ ನೀಡುತ್ತಾರೆ. ಈ ನಿಟ್ಟಿನಲ್ಲಿ ಕಡಿವಾಣ ಹಾಕಲು ನಿಯಮಗಳನ್ನು ರೂಪಿಸಬೇಕು ಎಂದರು. ಚರ್ಚೆಯ ನಂತರ ಅಂಗೀಕೃತವಾದ ಕರ್ನಾಟಕ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ವಿಧೇಯಕ-2023 ಮೇಲ್ಮನೆಯಲ್ಲೂ ಅಂಗೀಕಾರಗೊಂಡಿತು.